ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗ್ರಾಮ ಪಂಚಾಯಿತಿಗಳ ಅನುದಾನದ ದುರ್ಬಳಕೆ ಬಗ್ಗೆ

ಡಾ|| ವೈ ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

446(556) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ ಬಂದಿರುವ ಅನುದಾನ ಎಷ್ಟು; (ಪಂಚಾಯಿತಿವಾರು ವಿವರಗಳನ್ನು ನೀಡುವುದು)

(ಆ) ಈ ಅನುದಾನಗಳಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ; (ಯೋಜನಾವಾರು ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಈ ಅನುದಾನಗಳನ್ನು ದುರ್ಬಳಕೆ ಮಾಡಿಕೊಂಡಿರುವ ಪಂಚಾಯಿತಿಗಳ ವಿವರ ನೀಡುವುದು; ದುರ್ಬಳಕೆ ಆಗಿದ್ದಲ್ಲಿ, ಅಂತಹ ಪಂಚಾಯಿತಿಗಳ ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಏನು? (ಮಾಹಿತಿ ನೀಡುವುದು)